# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 409 (461) |
| 2. | ಸದಸ್ಯರ ಹೆಸರು | ಶ್ರೀ ಕವಟಗಿ ಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | 13-12-2018 |
| 4. | ಉತ್ತರಿಸುವವರು | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಸುವರ್ಣಸೌಧ ಸದ್ಬಳಕೆಗೆ ಹೊಸ ಯೋಜನೆಯನ್ನು ತರಲಾಗುವುದೆಂದು ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15.09.2018 ರಂದು ಬೆಳಗಾವಿಯಲ್ಲಿ ಹೇಳಿಕೆ ನೀಡಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಉತ್ತರ ಕರ್ನಾಟಕಕ್ಕೆ ಕೆಲವು ಸರ್ಕಾರಿ ಕಛೇರಿಗಳನ್ನು ಸ್ಥಳಾಂತರಿಸುವ ಕುರಿತು ಪ್ರಸ್ತಾವನೆಗಳನ್ನು ತಯಾರಿಸಿ, ಸಚಿವಸಂಪುಟಕ್ಕೆ ಮಂಡಿಸಲು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಸಂಶಾ 09 ಸಿಎಸ್‌ಸಿ 2018, ದಿನಾಂಕ: 25.09.2018ರಲ್ಲಿ ಸಚಿವಸಂಪುಟ ಉಪ ಸಮಿತಿಯನ್ನು ರಚಿಸಲಾಗಿದ್ದು, ಈ ಉಪ ಸಮಿತಿಗೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಗತ್ಯ ನೆರವು ನೀಡುತ್ತಿದೆ. ಸಚಿವ ಸಂಪುಟದ ಉಪ ಸಮಿತಿಯು ದಿನಾಂಕ: 04.10.2018 ಹಾಗೂ 01.12.2018 ರಂದು ಸಭೆ ಸೇರಿ ಉತ್ತರ ಕರ್ನಾಟಕಕ್ಕೆ ಕೆಲವು ಸರ್ಕಾರಿ ಕಚೇರಿಗಳನ್ನು ಸ್ಥಳಾಂತರಿಸುವ ಬಗ್ಗೆ ಚರ್ಚಿಸಿದೆ. ಸಚಿವ ಸಂಪುಟ ಉಪ ಸಮಿತಿ ಶಿಫಾರಸನ್ನು ನಿರೀಕ್ಷಿಸಿದೆ. |
| ಆ) | ಸರ್ಕಾರದ ಹಲವಾರು ಇಲಾಖೆಗಳ ಕಾರ್ಯಸ್ಥಾನವನ್ನು ಬೆಳಗಾವಿ ಸುವರ್ಣಸೌಧಕ್ಕೆ ಸ್ಥಳಾಂತರಿಸಲು ಉತ್ತರ ಕರ್ನಾಟಕದ ಎಲ್ಲಾ ಜನ ಪ್ರತಿನಿಧಿಗಳ ಮಹದಾಸೆಯಾಗಿದ್ದು, ಸರ್ಕಾರ ಈ ಬಗ್ಗೆ ಯೋಚಿಸಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 84 ಡಿಬಿಎಂ 2012, ದಿನಾಂಕ: 29.10.2013 ರಲ್ಲಿ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ದಿನಾಂಕ: 11.11.2013 ರಂದು ಸಭೆ ನಡೆಸಿ ಬೆಳಗಾವಿಯಲ್ಲಿನ ಸುವರ್ಣ ವಿಧಾನಸೌಧ ಕಟ್ಟಡಕ್ಕೆ ಯಾವ ಯಾವ ಇಲಾಖೆ/ಮಂಡಳಿ/ನಿಗಮಗಳನ್ನು ಸ್ಥಳಾಂತರಿಸಬಹುದು ಎಂಬ ಬಗ್ಗೆ ಚರ್ಚಿಸಿ, ಅಂತಿಮವಾಗಿ ಮುಖ್ಯ ಕಾರ್ಯದರ್ಶಿಯವರು ಈ ಬಗ್ಗೆ ನಿರ್ಣಯ ತೆಗೆದುಕೊಳ್ಳಬಹುದೆಂದು ತೀರ್ಮಾನಿಸಿತು.<br><br>ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 18.01.2014 ರಂದು ನಡೆದ ಸಭೆಯಲ್ಲಿ ಸುವರ್ಣ ವಿಧಾನಸೌಧ ಕಟ್ಟಡಕ್ಕೆ ಖಾಯಂ ಆಗಿ ಕೆಲವು ಇಲಾಖೆಗಳನ್ನು ಸ್ಥಳಾಂತರಿಸಿದಲ್ಲಿ ಅಲ್ಲಿ ಅಧಿವೇಶನ ನಡೆಯುವ ವೇಳೆಯಲ್ಲಿ ವಿಧಾನ ಮಂಡಲದ ಕಚೇರಿ, ಸಚಿವರುಗಳ ಕಚೇರಿ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಕಚೇರಿಗಳಿಗೆ ಸ್ಥಳಾವಕಾಶದ ಕೊರತೆ ಉಂಟಾಗುತ್ತದೆ. ಈ ಹಿಂದೆ ಎರಡು ಅಧಿವೇಶನಗಳು ನಡೆದ ಸಂದರ್ಭದಲ್ಲಿ, ಸುವರ್ಣ ವಿಧಾನಸೌಧ ಕಟ್ಟಡದಲ್ಲಿ ಯಾವುದೇ ಕಚೇರಿಗಳು ಕಾರ್ಯನಿರ್ವಹಿಸದೇ ಇದ್ದಾಗ್ಯೂ ಸಹ, ವಿಧಾನ ಮಂಡಲದ ಕಚೇರಿ, ಸಚಿವರುಗಳ ಕಚೇರಿ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಕಚೇರಿಗಳಿಗೆ ಸ್ಥಳಾವಕಾಶದ ಕೊರತೆ ಉಂಟಾಗಿರುತ್ತದೆ ಎಂಬ ಕಾರಣದ ಹಿನ್ನೆಲೆಯಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧ |

| | | |
|---|---|---|
| | | ಕಟ್ಟಡಕ್ಕೆ ಖಾಯಂ ಆಗಿ ಯಾವುದೇ ಕಚೇರಿಗಳನ್ನು ಸ್ಥಳಾಂತರಿಸುವುದು ಸೂಕ್ತವಲ್ಲವೆಂದು ನಿರ್ಧರಿಸಿದ್ದರಿಂದ, ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯನ್ನು ದಿನಾಂಕ: 25.03.2014ರ ಸರ್ಕಾರದ ಆದೇಶದಲ್ಲಿ ರದ್ದುಪಡಿಸಲಾಗಿದೆ. |
| ಇ) | ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ವರ್ಷಕ್ಕೆ ಒಂದು ಸಲ 10 ದಿನಗಳು ಮಾತ್ರ ಅಧಿವೇಶನ ನಡೆಸಲಾಗುತ್ತಿದ್ದು, ಇದನ್ನು ಕನಿಷ್ಠ 30 ದಿನಗಳವರೆಗೆ ಹೆಚ್ಚಿಸಲು ಈ ಭಾಗದ ಜನಪ್ರತಿನಿಧಿಗಳ ಆಶಯವಾಗಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸುವುದೇ; | 10 ದಿನಗಳ ಕಾಲ ಅಧಿವೇಶನ ನಡೆಸಲಾಗುತ್ತಿದ್ದು, ಇದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ. |
| (ಈ) | ಹಾಗಿದ್ದಲ್ಲಿ, ಅಧಿವೇಶನದ ಸಮಯದಲ್ಲಿ ಶಾಸಕರ ವಾಸ್ತವ್ಯಕ್ಕೆ ಅನುಕೂಲವಾಗಲು ಶಾಸಕರ ಭವನವನ್ನು ನಿರ್ಮಾಣ ಮಾಡುವ ಯೋಚನೆ ಸರ್ಕಾರಕ್ಕೆ ಇದೆಯೇ; | ಇಲ್ಲ |
| (ಉ) | ಇದೇ ರೀತಿ ಕಾರ್ಯನಿರ್ವಹಣೆಗೆ ಬೆಂಗಳೂರಿನಲ್ಲಿರುವ ಬಹುಮಹಡಿಗಳ ಕಟ್ಟಡದಂತೆ ಸುವರ್ಣ ವಿಧಾನಸೌಧದ ಬಳಿ ಕಟ್ಟಡ ನಿರ್ಮಾಣದ ಯೋಚನೆ ಸರ್ಕಾರಕ್ಕಿದೆಯೇ; | ಇಲ್ಲ |
| (ಊ) | ಇದ್ದಲ್ಲಿ, ಇದರ ರೂಪುರೇಷೆಗಳೇನು? (ವಿವರವಾದ ಮಾಹಿತಿಯನ್ನು ಒದಗಿಸುವುದು) | ಉದ್ಭವಿಸುವುದಿಲ್ಲ. |

ಸಂಖ್ಯೆ: ಸಿಆಸುಇ 280 ಡಿಬಿಎಂ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ